ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಸಿ4(6)ಪ್ರೌಶಿ/ಪ್ರೌಶಾ/ಶಾ.ಕಾ.ಪ್ರಾ/55/2021-22 ದಿನಾಂಕ:31/01/2022.

- ಜ್ಞಾಪನ -

ವಿಷಯ: ಬೆಂಗಳೂರು ಉತ್ತರ ಮತ್ತು ದಕ್ಷಿಣ ಶೈಕ್ಷಣಿಕ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಎಲ್ಲಾ ಶಾಲೆಗಳಲ್ಲಿ ಭೌತಿಕ ತರಗತಿಗಳನ್ನು ಪುನರಾರಂಭಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ:05.01.2022.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಬೆಂಗಳೂರು ಇವರ ಆದೇಶ ಸಂಖ್ಯೆ:ಆರ್‌ಡಿ.158.ಟಿಎನ್ಆರ್.2020. ದಿನಾಂಕ: 29/01/2022.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಡಿಎಸ್‌ಇಆರ್‌ಟಿ/ಇವಿಜಿ/ಶಾ.ಪ್ರಾ.ಪ್ರ.ಕಾ.ವಿ/2021-22. ದಿನಾಂಕ:16/08/2021.

*******

ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಕೋವಿಡ್-19 ರೂಪಾಂತರಿ ವೈರೆಸ್ "ಓಮಿಕ್ರಾನ್" ವೈರಾಣು ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಮತ್ತು ಸಾರ್ವಜನಿಕ ಆರೋಗ್ಯದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ನಿರ್ದೇಶನದಂತೆ ಬೆಂಗಳೂರು ನಗರ ಜಿಲ್ಲೆಯ, ಬೆಂಗಳೂರು ಉತ್ತರ ಮತ್ತು ದಕ್ಷಿಣ ಶೈಕ್ಷಣಿಕ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ/ಎಲ್.ಕೆ.ಜಿ/ಯು.ಕೆ.ಜಿ ಹಾಗೂ 1 ರಿಂದ 9ನೇ ತರಗತಿವರೆಗೆ ಭೌತಿಕ ತರಗತಿಗಳನ್ನು ದಿನಾಂಕ:06/01/2022 ರಿಂದ ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ಉಲ್ಲೇಖ-01 ರಲ್ಲಿ ತಿಳಿಸಲಾಗಿತ್ತು.

"In Bengaluru Urban District, All Schools and Colleges permitted to Re-open from 31-01-2022 strictly adhering to COVID-19 Appropriate Behaviour and following SOPs issued by the concerned Department. Schools and Colleges shall function as per the assessment of the respective District Administration / BBMP " ಎಂಬುದಾಗಿ ಉಲ್ಲೇಖ-2 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿರುತ್ತದೆ.

ಅದರಂತೆ, ಉಲ್ಲೇಖ-3ರಲ್ಲಿನ ಮತ್ತು ಆರೋಗ್ಯ ಇಲಾಖೆ ಹೊರಡಿಸಿರುವ ಕೋವಿಡ್-19ರ ಎಲ್ಲಾ ಮುಂಜಾಗ್ರತಾ/ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಹಾಗೂ ಜಿಲ್ಲಾಡಳಿತ / ಬೃ.ಬೆಂ.ಮ.ಪಾಲಿಕೆ ಕಾಲಕಾಲಕ್ಕೆ ನೀಡುವ ನಿರ್ದೇಶನಗಳ ಅನುಸಾರ ಬೆಂಗಳೂರು ನಗರ ಜಿಲ್ಲೆಯ, ಬೆಂಗಳೂರು ಉತ್ತರ ಮತ್ತು ದಕ್ಷಿಣ ಶೈಕ್ಷಣಿಕ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ/ ಎಲ್.ಕೆ.ಜಿ / ಯು.ಕೆ.ಜಿ ಹಾಗೂ 1 ರಿಂದ 9ನೇ ತರಗತಿವರೆಗೆ ಭೌತಿಕ ತರಗತಿಗಳನ್ನು ದಿನಾಂಕ: 31.01.2022 ರಿಂದ ಮಧ್ಯಾಹ್ನದ ಬಿಸಿಯೂಟ ಮತ್ತು ಕ್ಷೀರ ಭಾಗ್ಯ ಕಾರ್ಯಕ್ರಮಗಳೊಂದಿಗೆ ಎಂದಿನಂತೆ ನಡೆಸಿಕೊಂಡು ಹೋಗಲು ಹಾಗೂ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಪ್ರಸ್ತುತ ನಡೆಯುತ್ತಿರುವ ಭೌತಿಕ ತರಗತಿಗಳನ್ನು ಮುಂದುವರೆಸಿಕೊಂಡು ಹೋಗಲು ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರುಉತ್ತರ ಮತ್ತು ದಕ್ಷಿಣ ಜಿಲ್ಲೆ ಇವರಿಗೆ ಈ ಮೂಲಕ ತಿಳಿಸಿದೆ.

ಈ ಆದೇಶವು ಸರ್ಕಾರದಿಂದ/ಜಿಲ್ಲಾಡಳಿತದಿಂದ/ಬೃ.ಬೆಂ.ಮ.ಪಾಲಿಕೆಯಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಕೋವಿಡ್–19ರ ಮಾರ್ಗಸೂಚಿ/ಆದೇಶದ ಅನುಸಾರ ಬದಲಾವಣೆಗೆ ಒಳಪಟ್ಟಿರುತ್ತದೆ.

31/01/2022

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು.

**ಇವರಿಗೆ:–**

01. ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆ.
02. ಹಿರಿಯ ಸಹಾಯಕ ನಿರ್ದೇಶಕರು, ಇ–ಆಡಳಿತ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.
03. ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆಗಳ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ ಮುಂದಿನ ಕ್ರಮಕ್ಕಾಗಿ,
04. ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆಗಳ ಎಲ್ಲಾ ಶಾಲಾ ಮುಖ್ಯಸ್ಥರಿಗೆ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಮುಂದಿನ ಕ್ರಮಕ್ಕಾಗಿ.

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಮತ್ತು ಅಧ್ಯಕ್ಷರು, ರಾಜ್ಯ ಕಾರ್ಯಕಾರಿಣಿ ಸಮಿತಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಬೆಂಗಳೂರು.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
6. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
7. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
8. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ, ಬನಶಂಕರಿ ದೇವಸ್ಥಾನದ ಹತ್ತಿರ, ಬೆಂಗಳೂರು.
9. ಆಯುಕ್ತರು, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು.
11. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
12. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
13. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
15. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ನಗರ ಜಿಲ್ಲಾ ನೋಡಲ್ ಅಧಿಕಾರಿಗೆ.
16. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು ರವರಿಗೆ.
17. ಕಛೇರಿ ಪ್ರತಿ.